# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 518

ಸದಸ್ಯರ ಹೆಸರು : ಶ್ರೀ ಗೋವಿಂದ ರಾಜು(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಮಾನ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ : 08-12-2023.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ 5 ವರ್ಷಗಳಲ್ಲಿ ಬಾಲಪರಾಧ ಕಾಯ್ದೆಯಡಿ ಈವರೆಗೆ ರಾಜ್ಯದಲ್ಲಿ ಎಷ್ಟು ಪ್ರಕರಣಗಳನ್ನು ಸರ್ಕಾರವು ದಾಖಲಿಸಿದೆ:</td><td>ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ಬಾಲಾಪರಾಧ ಕಾಯ್ದೆ ಅಡಿಯಲ್ಲಿ ಗೃಹ ಇಲಾಖೆಯಲ್ಲಿ ದಾಖಲಾದ ಪ್ರಕರಣಗಳು ಕೆಳಕಂಡಂತಿದೆ;
<table>
<tr><th>ವರ್ಷ</th><th>ಬಾಲಾಪರಾಧ ಕಾಯ್ದೆಯಡಿ ದಾಖಲಾದ ಪ್ರಕರಣಗಳ ಸಂಖ್ಯೆ</th></tr>
<tr><td>2018</td><td>50</td></tr>
<tr><td>2019</td><td>48</td></tr>
<tr><td>2020</td><td>40</td></tr>
<tr><td>2021</td><td>76</td></tr>
<tr><td>2022</td><td>77</td></tr>
<tr><td>2023 (ನವಂಬರ್ ವರೆಗೆ)</td><td>90</td></tr>
<tr><td>ಒಟ್ಟು</td><td>381</td></tr>
</table>
ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015, ಮಾದರಿ ನಿಯಮಗಳು 2016ರಡಿ ರಾಜ್ಯಾದ್ಯಂತ ರಚಿಸಲಾಗಿರುವ 33 ಬಾಲನ್ಯಾಯ ಮಂಡಳಿಗಳಲ್ಲಿ ಕಳೆದ 5 ವರ್ಷಗಳಲ್ಲಿ ದಾಖಲಾಗಿರುವ ಪ್ರಕರಣಗಳು ಕೆಳಕಂಡಂತಿದೆ;
<table>
<tr><th colspan="6">ಕಳೆದ 5 ವರ್ಷಗಳಲ್ಲಿ ಬಾಲನ್ಯಾಯ ಮಂಡಳಿಯ ಮುಂದೆ ದಾಖಲಾಗದ ಪ್ರಕರಣಗಳ ವಿವರ</th></tr>
<tr><td>2019</td><td>2020</td><td>2021</td><td>2022</td><td>2023</td><td>ಒಟ್ಟು</td></tr>
<tr><td>1529</td><td>1410</td><td>2349</td><td>2010</td><td>2132</td><td>9430</td></tr>
</table></td></tr>
<tr><td>ಆ)</td><td>18 ವರ್ಷದೊಳಗಿನ ಯುವಕ ಮತ್ತು ಯುವತಿಯರು ಮಾದಕ ವಸ್ತುಗಳ ಸೇವನೆ ವ್ಯಸನಿಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹ ಯುವಕ ಮತ್ತು ಯುವತಿಯರನ್ನು ದುಷ್ಚಟಗಳಿಂದ ಮುಕ್ತರಾಗುವಂತೆ ಮಾಡಲು ಸರ್ಕಾರವು ಯಾವ ರೀತಿಯ ಕ್ರಮಗಳನ್ನು ಕೈಗೊಂಡಿರುತ್ತದೆ;</td><td>18 ವರ್ಷದೊಳಗಿನ ಯುವಕ ಮತ್ತು ಯುವತಿಯರು ಮಾದಕ ವಸ್ತು ವ್ಯಸನಿಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಮೂಲಕ ಜಿಲ್ಲಾ, ತಾಲ್ಲೂಕು ಹಾಗೂ ಪಂಚಾಯ್ತಿ ವ್ಯಾಪ್ತಿಯಲ್ಲಿ ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳಿಗೆ ಸರ್ಕಾರದಿಂದ ಜಾರಿಯಲ್ಲಿರುವ ಯೋಜನೆ/ಕಾರ್ಯಕ್ರಮಗಳ ಮತ್ತು ಮಕ್ಕಳ ರಕ್ಷಣೆಗಾಗಿ ಇರುವ ಕಾಯ್ದೆ ಕಾನೂನುಗಳ ಬಗ್ಗೆ ಅರಿವು ಮೂಡಿಸುವುದರೊಂದಿಗೆ ಶಾಲಾ ಕಾಲೇಜು ಮಕ್ಕಳಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.<br>ರಾಜ್ಯದಲ್ಲಿ ಕೇಂದ್ರ ಸರ್ಕಾರದ ಅನುದಾನದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಒಟ್ಟು 32 ಮಾದಕ ವಸ್ತು ವ್ಯಸನಿಗಳ ಸಮಗ್ರ ಪುನರ್ವಸತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ. ಸದರಿ ಕೇಂದ್ರಗಳಲ್ಲಿ ಇಂತಹ ಯುವಕ ಯುವತಿಯರಿಗೆ ಸೂಕ್ತ ಸಮಾಲೋಚನೆ ಮತ್ತು ಔಷಧೋಪಚಾರ ನೀಡುವ ಮೂಲಕ ದುಷ್ಚಟಗಳಿಂದ ಹೊರಬರಲು ಪ್ರೇರಪಿಸಲಾಗುತ್ತಿದೆ.</td></tr>
</table>

| | | |
|---|---|---|
| | | ಕೇಂದ್ರ ಸರ್ಕಾರದ ನಶಾ ಮುಕ್ತ ಭಾರತ ಅಭಿಯಾನ ಯೋಜನೆಯಡಿ ಮೊದಲ ಹಂತದಲ್ಲಿ 6 ಜಿಲ್ಲೆಗಳನ್ನು ಮತ್ತು 2ನೇ ಹಂತದಲ್ಲಿ 4 ಜಿಲ್ಲೆಗಳನ್ನು ಹಾಗೂ ಬಾಕಿ ಉಳಿದ 21 ಜಿಲ್ಲೆಗಳನ್ನು 2023-24ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರವು ಗುರುತಿಸಿದೆ. ಸದರಿ ಯೋಜನೆಯಡಿ ಶಾಲಾ ಕಾಲೇಜುಗಳಲ್ಲಿ, ಸಮುದಾಯದಲ್ಲಿ ಮಾದಕ ವಸ್ತು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಗುತ್ತದೆ.<br><br>ಕೇಂದ್ರ ಸರ್ಕಾರದ ನ್ಯಾಷನಲ್ ಆಕ್ಷನ್ ಪ್ಲಾನ್ ಫಾರ್ ಡ್ರಗ್ ಡಿಮಾಂಡ್ ರಿಡಕ್ಷನ್ ಯೋಜನೆಯಡಿ ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಜಾಗೃತಿಗಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br><br>1. ಮಾದಕ ವಸ್ತು ತಡೆಗಟ್ಟುವ ಬಗ್ಗೆ ಶಿಕ್ಷಣ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳು.<br>2. ಮಾದಕ ವಸ್ತು ತಡೆಗಟ್ಟುವ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳ ಸಾಮರ್ಥ್ಯ ವೃದ್ಧಿ.<br>3. ಮಾದಕ ವಸ್ತು ವ್ಯಸನಿಗಳ ಸಮಗ್ರ ಪುನರ್ವಸತಿ ಕೇಂದ್ರಗಳ ಮೂಲಕ ಚಿಕಿತ್ಸೆ ಮತ್ತು ಪುನರ್ವಸತಿ.<br>4. ಮಾದಕ ವಸ್ತು ವ್ಯಸನಿಗಳಿಗೆ ಅಥವಾ ಅವಲಂಭಿತರಿಗೆ ಕೌಶಲ್ಯ ಅಭಿವೃದ್ಧಿ, ವೃತ್ತಿಪರ ತರಬೇತಿ ಮತ್ತು ಜೀವನೋಪಾಯಕ್ಕಾಗಿ ಬೆಂಬಲ ನೀಡುವುದು ಮುಂತಾದವುಗಳನ್ನೊಳಗೊಂಡಂತೆ ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳಬಹುದಾದ ಯೋಜನೆಗಳ ಬಗ್ಗೆ ರಾಜ್ಯ ಕ್ರಿಯಾ ಯೋಜನೆಯನ್ನು ತಯಾರಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದು, ಕೇಂದ್ರ ಸರ್ಕಾರದ ಅನುಮೋದನೆಯನ್ನು ನಿರೀಕ್ಷಿಸಲಾಗಿದೆ. |
| ಇ) | ಇತ್ತೀಚೆಗೆ ಕೋಲಾರ ನಗರದ ಸರ್ಕಾರಿ ಶಾಲೆಯ ಆವರಣವೊಂದರಲ್ಲಿ 18 ವರ್ಷದೊಳಗಿನ ಯುವಕರು ಪಾನಮತ್ತರಾಗಿ ಯುವಕನೊಬ್ಬನನ್ನು ಬರ್ಬರವಾಗಿ ಹತ್ಯೆ ಮಾಡಿದ್ದು, ಈ ಪ್ರಕರಣದಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು; ಯಾವ ರೀತಿಯ ಕ್ರಮಗಳನ್ನು ಜರುಗಿಸಿದೆ? (ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು) | ಇತ್ತೀಚೆಗೆ ಕೋಲಾರ ನಗರದ ಸರ್ಕಾರಿ ಶಾಲೆಯ ಆವರಣವೊಂದರಲ್ಲಿ ನಡೆದ ಘಟನೆಯಲ್ಲಿ ಮೃತಪಟ್ಟ ಬಾಲಕನ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕೋಲಾರ ನಗರ ಪೊಲೀಸ್ ಠಾಣೆಯಲ್ಲಿ ಮೊ.ಸಂ 211/2023.ಕಲಂ 302 ರ/ವಿ 34 ಐ.ಪಿ.ಸಿ ರೀತ್ಯಾ ಪ್ರಕರಣಗಳು ದಾಖಲಾಗಿದ್ದು ಈ ಪ್ರಕರಣದಲ್ಲಿ ಒಟ್ಟು 8 ಜನರನ್ನು ದಸ್ತಗಿರಿ ಮಾಡಲಾಗಿರುತ್ತದೆ. 8 ಜನ ಆರೋಪಿಗಳ ಪೈಕಿ 4ಜನ ಕಾನೂನು ಸಂಘರ್ಷಕ್ಕೊಳಗಾದ ಬಾಲಕರಾಗಿದ್ದು, ಇವರನ್ನು ಪತ್ತೆ ಮಾಡಿ ಕೆ.ಜಿ.ಎಫ್ ನ ಬಾಲನ್ಯಾಯ ಮಂಡಳಿಯ ಮುಂದೆ ಹಾಜರುಪಡಿಸಿದ್ದು, ಹಾಲಿ ಬಾಲನ್ಯಾಯಾಂಗ (ವೀಕ್ಷಣಾಲಯ) ಬಂಧನದಲ್ಲಿರುತ್ತಾರೆ. ಉಳಿದ 4 ಜನ ಆರೋಪಿಗಳು ನ್ಯಾಯಾಂಗ ಬಂಧನದಲ್ಲಿರುತ್ತಾರೆ. ಪ್ರಸ್ತುತ ಪ್ರಕರಣವು ತನಿಖೆಯಲ್ಲಿದೆ. |

ಮಮಇ 127 ಮಭಾಬ 2023

(ಲಕ್ಷ್ಮೀ ಆರ್. ಹೆಬ್ಬಾಳಕರ್)
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.